# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>Part – I | ಬೆಂಗಳೂರು, ಬುಧವಾರ, ೧೫, ಜೂನ್, ೨೦೨೨ (ಜ್ಯೇಷ್ಠ, ೨೫, ಶಕವರ್ಷ, ೧೯೪೪)<br>BENGALURU, WEDNESDAY, 15, JUNE, 2022 ( JYEISHTA, 25, SHAKAVARSHA, 1944) | ನಂ. ೩೪೫<br>No. 345 |
|---|---|---|


## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 03 ಹೈಕಕೋ 2019

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 15.06.2022.

### ಸುತ್ತೋಲೆ

ವಿಷಯ: ಕಲ್ಯಾಣ-ಕರ್ನಾಟಕ ಪ್ರದೇಶದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವಲ್ಲಿ ವಿವಿಧ ನೇಮಕಾತಿ ಪ್ರಾಧಿಕಾರಗಳು ಪಾಲಿಸಬೇಕಾದ ವಿಧಿ-ವಿಧಾನಗಳ ಬಗ್ಗೆ.

ಉಲ್ಲೇಖ: ಸುತ್ತೋಲೆ ಸಂಖ್ಯೆ: ಸಿಆಸುಇ 3 ಹೈಕಕೋ 2018, ದಿನಾಂಕ 06.06.2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ದಿನಾಂಕ 06.06.2020ರ ಸುತ್ತೋಲೆಯಲ್ಲಿ ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವ ಸಂದರ್ಭದಲ್ಲಿ ನೇಮಕಾತಿ ಪ್ರಾಧಿಕಾರಗಳು ಎರಡೂ ವೃಂದದ ಹುದ್ದೆಗಳಿಗೆ ಏಕ ಕಾಲಕ್ಕೆ ಒಂದೇ ಅಧಿಸೂಚನೆಯಲ್ಲಿ ಸ್ಥಳೀಯ ಮತ್ತು ಮಿಕ್ಕುಳಿದ ವೃಂದಗಳಲ್ಲಿ ಲಭ್ಯವಿರುವ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾಗಿ ಮೀಸಲಾತಿವಾರು (ನೇರ/ಸಮತಳ) ವರ್ಗೀಕರಣವನ್ನು ನಮೂದಿಸಿ ಒಂದೇ ಅಧಿಸೂಚನೆಯನ್ನು ಹೊರಡಿಸಿ, ಒಂದೇ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಿ, ಸ್ಥಳೀಯ ಅಭ್ಯರ್ಥಿಗಳು ತಮ್ಮ ಇಚ್ಛೆಯಂತೆ ಸ್ಥಳೀಯ ಅಥವಾ ಮಿಕ್ಕುಳಿದ ವೃಂದವನ್ನು ಆಯ್ಕೆ ಮಾಡಿಕೊಳ್ಳಲು ಸ್ಪಷ್ಟ ಹಾಗೂ ನಿಖರ ಆಯ್ಕೆಗಳನ್ನು ಪಡೆದು ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳುವಂತೆ ತಿಳಿಸಲಾಗಿರುತ್ತದೆ.

ದಿನಾಂಕ: 06.06.2020ರ ಸುತ್ತೋಲೆಗೆ ಕಲ್ಯಾಣ ಕರ್ನಾಟಕ ಭಾಗದ ಸ್ಥಳೀಯ ಅಭ್ಯರ್ಥಿಗಳಿಂದ ಹಾಗೂ ಆ ಭಾಗದ ಜನಪ್ರತಿನಿಧಿಗಳಿಂದ ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ, ಸದರಿ ವಿಷಯವನ್ನು ನಿರ್ಣಯಕ್ಕಾಗಿ ದಿನಾಂಕ: 07.05.2022ರಂದು ನಡೆದ ಸಚಿವ ಸಂಪುಟ ಉಪ ಸಮಿತಿಯ ಮುಂದೆ ಮಂಡಿಸಲಾಗಿದ್ದು, ಸಮಿತಿಯ ತೀರ್ಮಾನದಂತೆ ತಕ್ಷಣದಿಂದ ಜಾರಿಗೆ ಬರುವಂತೆ ಉಲ್ಲೇಖಿತ ದಿನಾಂಕ: 06.06.2020ರ ಸುತ್ತೋಲೆಯನ್ನು ಹಿಂಪಡೆಯಲಾಗಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ವಿವಿಧ ನೇಮಕಾತಿ ಪ್ರಾಧಿಕಾರಗಳು ಇನ್ನು ಮುಂದೆ ಮಿಕ್ಕುಳಿದ ವೃಂದ ಹಾಗೂ ಸ್ಥಳೀಯ ವೃಂದದಲ್ಲಿ ಲಭ್ಯವಿರುವ ನೇರ ನೇಮಕಾತಿ ಹುದ್ದೆಗಳಿಗೆ ಅರ್ಜಿ ಆಹ್ವಾನಿಸುವ ಅಧಿಸೂಚನೆಯನ್ನು ಪ್ರತ್ಯೇಕವಾಗಿ ಹೊರಡಿಸಿ, ಪ್ರತ್ಯೇಕವಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಿ, ಪ್ರತ್ಯೇಕವಾಗಿ ನೇಮಕಾತಿ ಪ್ರಕ್ರಿಯೆ ಕೈಗೊಂಡು ಆಯ್ಕೆಯನ್ನು ಅಂತಿಮಗೊಳಿಸುವಂತೆ ಸೂಚಿಸಿದೆ.

ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಮಾತ್ರ ಒಂದೇ ನೇಮಕಾತಿ ಅಧಿಸೂಚನೆಯಲ್ಲಿ ಸ್ಥಳೀಯ ಮತ್ತು ಮಿಕ್ಕುಳಿದ ವೃಂದಗಳಲ್ಲಿ ಲಭ್ಯವಿರುವ ಹುದ್ದೆಗಳ ಸಂಖ್ಯೆಯನ್ನು ಪ್ರತ್ಯೇಕವಾಗಿ ಮೀಸಲಾತಿವಾರು (ನೇರ / ಸಮತಳ) ವರ್ಗೀಕರಣವನ್ನು ನಮೂದಿಸಿ ಒಂದೇ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಿ, ಸ್ಥಳೀಯ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸುವ ಸಮಯದಲ್ಲಿ ಈ ಕೆಳಕಂಡಂತೆ ಆಯ್ಕೆಯನ್ನು ಪಡೆಯುವಂತೆ ಸೂಚಿಸಿದೆ:-

1. ಹೈದ್ರಾಬಾದ್-ಕರ್ನಾಟಕ ಸ್ಥಳೀಯ ವೃಂದದ ಮೀಸಲಾತಿ ಹುದ್ದೆಗಳಿಗೆ ಆಯ್ಕೆ ಕೋರುವಿರಾ? ಹೌದು / ಇಲ್ಲ.
2. ಮಿಕ್ಕುಳಿದ ವೃಂದದ ಹುದ್ದೆಗಳಿಗೂ ಸಹ ಆಯ್ಕೆ ಕೋರುವಿರಾ? ಹೌದು / ಇಲ್ಲ.
3. ಅರ್ಜಿ ಸಲ್ಲಿಸುವ ಸಮಯದಲ್ಲಿ ನೀವು ನೀಡಿರುವ ಆದ್ಯತೆಯಂತೆ ಸ್ಥಳೀಯ ಮತ್ತು ಮಿಕ್ಕುಳಿದ ಎರಡೂ ವೃಂದದಲ್ಲಿ ಒಂದೇ ಹುದ್ದೆಯ ಆಯ್ಕೆಗೆ ಅರ್ಹತೆ ಹೊಂದಿದಲ್ಲಿ ಯಾವ ವೃಂದದ ಹುದ್ದೆಗೆ ಆಯ್ಕೆ ಬಯಸುತ್ತೀರಾ? **ಸ್ಥಳೀಯ ವೃಂದ / ಮಿಕ್ಕುಳಿದ ವೃಂದ**
4. ಅರ್ಜಿ ಸಲ್ಲಿಸುವ ಸಮಯದಲ್ಲಿ ನೀವು ನೀಡಿರುವ ಹುದ್ದೆಗಳ ಆದ್ಯತೆಯಂತೆ ಮಿಕ್ಕುಳಿದ ವೃಂದದಲ್ಲಿ ಸ್ಥಳೀಯ ವೃಂದಕ್ಕಿಂತ ಉತ್ತಮ ಆದ್ಯತೆ ದೊರೆಯುವುದಾದಲ್ಲಿ ಮಿಕ್ಕುಳಿದ ವೃಂದ ಆಯ್ಕೆ ಮಾಡುವಿರಾ? **ಹೌದು / ಇಲ್ಲ.**

ಈಗಾಗಲೇ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳನ್ನು ಹೊರತುಪಡಿಸಿ ಒಂದೇ ಅಧಿಸೂಚನೆ ಹೊರಡಿಸಿ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುವ ಪ್ರಕರಣಗಳಿಗೆ ಸೀಮಿತವಾಗುವಂತೆ ಮಾತ್ರ ದಿನಾಂಕ: 06.06.2020ರ ಸುತ್ತೋಲೆಯಲ್ಲಿ ನೀಡಲಾಗಿರುವ ನಿರ್ದೇಶನಗಳನ್ವಯ ಆಯ್ಕೆ ಪ್ರಕ್ರಿಯೆಯನ್ನು ಅಂತಿಮಗೊಳಿಸುವಂತೆ ಸೂಚಿಸಲಾಗಿದೆ.

(ವೀರಭದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು-1).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು
SUNIL GARDE